ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಹತ್ತನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 12ನೇ ಜುಲೈ, 2016
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಹೆಚ್.ಡಿ.ಕುಮಾರಸ್ವಾಮಿ, ಆರ್.ಅಶೋಕ್, ಕೆ.ಜಿ.ಬೋಪಯ್ಯ, ವೈ.ಎಸ್.ವಿ.ದತ್ತ ಮತ್ತು ಇತರರು– ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಮತ್ತು ಪೊಲೀಸ್ ವ್ಯವಸ್ಥೆ ಕುಸಿದಿದ್ದು, ಪ್ರಾಮಾಣಿಕ ಅಧಿಕಾರಿಗಳಿಗೆ ರಕ್ಷಣೆ ಇಲ್ಲದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಹಾಗೂ ಸ್ವಯಂ ನಿವೃತ್ತಿಯಾಗುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿರುವ ಕುರಿತು ಮತ್ತು ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ/ದೌರ್ಜನ್ಯಗಳನ್ನು ತಡೆಗಟ್ಟುವ ವಿಷಯದ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಆರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಆರನೇ ಪಟ್ಟಿ

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಕಳುಹಿಸಲಾಗಿರುವ ಒಂದು ಮತ್ತು ಎರಡನೇ ಪಟ್ಟಿಯ ರೀತ್ಯಾ

4. ವರದಿಯನ್ನೊಪ್ಪಿಸುವುದು

ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಅಧ್ಯಕ್ಷರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ) ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 31ನೇ ವರದಿಯನ್ನು ಒಪ್ಪಿಸುವುದು.

....2.

5. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು.

1. ಹುಬ್ಬಳ್ಳಿ-ಧಾರವಾಡ ವಿಧಾನಸಭಾ ಕ್ಷೇತ್ರದ ಹುಬ್ಬಳ್ಳಿ ವಾರ್ಡ್ ಸಂಖ್ಯೆ: 50, 57, 58 ಮತ್ತು 63 ಗಳಲ್ಲಿನ ನಿವಾಸಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ.

2. ಬೇಲೂರು ತಾಲ್ಲೂಕಿನ ಕಸಬಾ ಹೋಬಳಿ ಯಗಚಿ ಜಲಾಶಯದ ಹಿನ್ನೀರಿನ ಶೀತ ಪೀಡಿತ ಪ್ರದೇಶ ನಾರಾಯಣಪುರ ಗ್ರಾಮದ ಪುನರ್ ವಸತಿ ಬಗ್ಗೆ.

3. ಬೀದರ್-ಚಿಂಚೋಳಿ ರಸ್ತೆಯನ್ನು ದುರಸ್ಥಿ ಮಾಡುವ ಬಗ್ಗೆ.

4. ಬೀದರ್ ತಾಲ್ಲೂಕಿನಲ್ಲಿ ಬಹುಗ್ರಾಮ ಕುಡಿಯುವ ನೀರಿನ ಸರಬರಾಜು ಯೋಜನೆಯ ಅನುಷ್ಠಾನದಲ್ಲಿ ಉದ್ದೇಶ ಪೂರ್ವಕ ವಿಳಂಬವಾಗುತ್ತಿರುವ ಬಗ್ಗೆ.

5. ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದವರು(K.I.A.L.), ದೇವನಹಳ್ಳಿ ತಾಲ್ಲೂಕಿನ ಅಣ್ಣೇಶ್ವರ ಮತ್ತು ಬೆಟ್ಟಕೋಟೆ ಗ್ರಾಮ ಪಂಚಾಯತಿಗಳಿಗೆ ಹಾಗೂ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಗೆ ಬರುವ ಎರಡು ಗ್ರಾಮ ಪಂಚಾಯತಿಗಳಿಗೆ ಸುಮಾರು 50.00 ಕೋಟಿಗೂ ಹೆಚ್ಚು ಕಂದಾಯ ಪಾವತಿಸದೆ ಬಾಕಿ ಉಳಿಸಿಕೊಂಡಿರುವುದಲ್ಲದೇ ಕಾನೂನು ರೀತ್ಯ ಪರಿಸರ ಸಂರಕ್ಷಣೆಗೆ ಹಾಗೂ ಸ್ಥಳೀಯರಿಗೆ ಮತ್ತು ಜಮೀನು ಕಳೆದುಕೊಂಡ ರೈತ ಕುಟುಂಬಗಳಿಗೆ ಉದ್ಯೋಗ ನೀಡಲು ಸೂಕ್ತ ಕ್ರಮ ಕೈಗೊಳ್ಳದೇ ಇರುವ ಬಗ್ಗೆ.

6. ಚನ್ನಪಟ್ಟಣ ತಾಲ್ಲೂಕು, ಹೊಸಹಳ್ಳಿ ಗ್ರಾಮದ ಸರ್ವೆ ನಂ.95/3ರಲ್ಲಿ 05ಗುಂಟೆ ಹರಿಜನ ಸ್ಮಶಾನ ಭೂಮಿ ಹಾಗೂ ಸರ್ವೆ ನಂ.100 ಮತ್ತು 102ರ ಮಧ್ಯದಲ್ಲಿ ಹಾದುಹೋಗುವ ದಾರಿಯನ್ನು ಒತ್ತುವರಿ ಮಾಡಿದ್ದು, ಈ ಜಾಗವನ್ನು ತೆರವುಗೊಳಿಸುವ ಬಗ್ಗೆ.

6. ವಿತ್ತೀಯ ಕಾರ್ಯಕಲಾಪಗಳು

1. 2016-17ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ.

ಬೇಡಿಕೆ ಸಂಖ್ಯೆ	**ಬೇಡಿಕೆಯ ಹೆಸರು**
07	: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
14	: ಕಂದಾಯ
08	: ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
16	: ವಸತಿ

....3.

2. 2016–17ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಹಾಗೂ ಚರ್ಚೆ.

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
01	: ಕೃಷಿ ಮತ್ತು ತೋಟಗಾರಿಕೆ
02	: ಪಶುಸಂಗೋಪನೆ ಮತ್ತು ಮೀನುಗಾರಿಕೆ
09	: ಸಹಕಾರ

7. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎ.ಎಸ್.ಪಾಟೀಲ್ (ನಡಹಳ್ಳಿ)** ಇವರು – ವಿಜಯಪುರ ಜಿಲ್ಲೆ ದೇವರಹಿಪ್ಪರಗಿಯಲ್ಲಿ ಹಳೆಯ ಬಸ್ ನಿಲ್ದಾಣ ಕೆಡವಿ ಪುನರ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

2. **ಶ್ರೀ ವಿ. ಸುನೀಲ್ ಕುಮಾರ್** ಇವರು – ರಾಜ್ಯದಲ್ಲಿ ಉಲ್ಬಣಗೊಳ್ಳುತ್ತಿರುವ ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಆರೋಗ್ಯ ಕೇಂದ್ರಗಳಲ್ಲಿ ಅವಶ್ಯವಿರುವ ಸಿಬ್ಬಂದಿ ನಿಯೋಜನೆ ಹಾಗೂ ಸಕಾಲಿಕ ಚಿಕಿತ್ಸೆ ನೀಡುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. **ಶ್ರೀ ವಡ್ನಾಳ್ ರಾಜಣ್ಣ** ಇವರು – ಅಡಿಕೆ ಮತ್ತು ತೆಂಗು ಬೆಲೆ ಕುಸಿತದಿಂದ ಸಂಕಷ್ಟದಲ್ಲಿರುವ ರೈತರ ಸ್ಥಿತಿಯ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆಯಲು ಹಾಗೂ ತೋಟಗಾರಿಕೆ ಬೆಳೆಗಳ ಧಾರಣೆ ಕುಸಿಯುವುದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

4. **ಶ್ರೀ ಯು.ಬಿ. ಬಣಕಾರ** ಇವರು – ಹಿರೇಕೆರೂರು ತಾಲ್ಲೂಕಿನ ಬೋಗಾವಿ ಗ್ರಾಮದಲ್ಲಿನ 15 ಎಕರೆ ಜಾಗವನ್ನು ಗ್ರಾಮಸ್ಥರು ಒಪ್ಪಿಗೆ ನೀಡಿರುವಂತೆ ವಸತಿ ಶಾಲೆಗಳಿಗೆ ಮಂಜೂರು ಮಾಡುವ ವಿಷಯದ ಪ್ರಸ್ತಾವನೆ ಮತ್ತು ಮಂಜೂರಾತಿ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5. **ಶ್ರೀ ವೈ.ಎ. ನಾರಾಯಣಸ್ವಾಮಿ** ಇವರು – ಬೆಂಗಳೂರಿನ ಹೆಬ್ಬಾಳ ಕ್ಷೇತ್ರದ ಕೊಳಚೆ ಪ್ರದೇಶದಲ್ಲಿ ವಾಸಿಸುವವರಿಗೆ ವಾಸದ ಮನೆಗಳ ಹಕ್ಕುಪತ್ರಗಳನ್ನು ನೀಡಿ ಸಮಸ್ಯೆ ಪರಿಹರಿಸುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

6. **ಶ್ರೀ ಹೆಚ್.ಡಿ. ರೇವಣ್ಣ** ಇವರು– ಹಾಸನ ತಾಲ್ಲೂಕಿನ ಶಾಂತಿಗ್ರಾಮ ಮತ್ತು 183 ಗ್ರಾಮಗಳಲ್ಲಿ ಕುಡಿಯುವ ನೀರಿನ ಫ್ಲೋರೈಡ್ ಅಂಶದ ಪ್ರಮಾಣವು ಅಧಿಕವಾಗಿದ್ದು ಕುಡಿಯುವ ನೀರು ಕಲುಷಿತವಾಗಿರುವುದರಿಂದ ಇಂತಹ ಪ್ರದೇಶಗಳಿಗೆ ಭಾರತ ಸರ್ಕಾರದ ಸುತ್ತೋಲೆಯಂತೆ ಶುದ್ಧ ಕುಡಿಯುವ ನೀರಿನ ಯೋಜನೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

....4.

7. **ಶ್ರೀ ಎಂ.ಟಿ. ಕೃಷ್ಣಪ್ಪ** ಇವರು– ತುರುವೇಕೆರೆ ತಾಲ್ಲೂಕಿನ ಮಲ್ಲಾಘಟ್ಟ ಕೆರೆ ಕೋಡಿಯ ಇಕ್ಕೆಲಗಳಲ್ಲಿರುವ ಪುರಾತನವಾದ ಶ್ರೀ ಗಂಗಾಧರೇಶ್ವರ ದೇವಸ್ಥಾನದ ಪ್ರದೇಶವನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರ ಗಮನ ಸೆಳೆಯುವುದು.

8. **ಶ್ರೀ ಎನ್.ಹೆಚ್. ಕೋನರಡ್ಡಿ** ಇವರು– ಬೆಂಗಳೂರಿನ ಇಂದಿರಾ ನಗರದಲ್ಲಿರುವ ಹಂಸಧ್ವನಿ ಕಿವುಡ ಮತ್ತು ಮೂಕ ಮಕ್ಕಳ ಶಾಲೆಯನ್ನು ಪೂರ್ಣ ಪ್ರಮಾಣದ ವಸತಿಯುತ ಶಾಲೆಯನ್ನಾಗಿ ಮಾಡಲು ನಿರ್ದಿಷ್ಟ ಸಮಯವನ್ನು ತಿಳಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

9. **ಶ್ರೀ ಕೆ.ಬಿ. ಪ್ರಸನ್ನಕುಮಾರ್** ಇವರು– ಶಿವಮೊಗ್ಗ ನಗರದ ಸೋಗಾನೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸುತ್ತಿರುವ ನೂತನ ಜೈಲು ಕಟ್ಟಡ ಕಾಮಗಾರಿ ಸ್ಥಗಿತಗೊಂಡಿರುವುದನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10. **ಶ್ರೀ ಹೆಚ್.ಎಸ್. ಪ್ರಕಾಶ್ ಮತ್ತು ಶ್ರೀ ಹೆಚ್.ಡಿ. ರೇವಣ್ಣ** ಇವರುಗಳು– ಹಾಸನದ ಗಂಧದಕೋಠಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಅಗತ್ಯವಿರುವ ಅನುದಾನವನ್ನು ಮಂಜೂರು ಮಾಡುವ ಕುರಿತು ಹಾಗೂ ಅವಶ್ಯಕ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಭೋದಕ–ಭೋದಕೇತರ ಸಿಬ್ಬಂದಿಗಳನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

11. **ಶ್ರೀ ಗುರು ಪಾಟೀಲ ಶಿರವಾಳ** ಇವರು– ಯಾದಗೀರ್ ಜಿಲ್ಲೆಯ ಸುರಪುರ ತಾಲ್ಲೂಕಿನ ಏವೂರ ಗ್ರಾಮದ ಸರ್ಕಾರಿ ಸರ್ವೆ ನಂ.115ರ 193 ಎಕರೆ 10ಗುಂಟೆ ಜಮೀನಿನಲ್ಲಿ ಅಕ್ರಮ ಸಾಗುವಳಿದಾರರನ್ನು ಒಕ್ಕಲೆಬ್ಬಿಸುವ ವಿಷಯದಲ್ಲಿ ಅಕ್ರಮ–ಸಕ್ರಮ ಸಮಿತಿ ಹಾಗೂ ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಅರ್ಜಿಗಳು ವಿಚಾರಣೆಗೆ ಬಾಕಿ ಇರುವುದು ವಿಲೇವಾರಿಯಾಗುವತನಕ ಒಕ್ಕಲೆಬ್ಬಿಸದಂತೆ ಹಾಗೂ ದಾಖಲು ಮಾಡಿರುವ ಕೇಸನ್ನು ವಾಪಸ್ ಪಡೆಯುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://www.kla.kar.nic.in/assembly/lob/lob.htm)